ಮಕ್ಕಳಿಗೆ ಏಳು ವರ್ಷ ಪ್ರಾಯವಾದಾಗ ನಮಾಝ್ ನಿರ್ವಹಿಸಲು ಆದೇಶಿಸಿರಿ, ಹತ್ತು ವರ್ಷ ಪ್ರಾಯವಾದಾಗ ಅದಕ್ಕಾಗಿ ಹೊಡೆಯಿರಿ ಮತ್ತು ಮಲಗುವ ಸ್ಥಳದಲ್ಲಿ ಅವರನ್ನು ಬೇರ್ಪಡಿಸಿರಿ

ಅಮ್ರ್ ಬಿನ್ ಶುಐಬ್ ರಿಂದ, ಅವರು ಅವರ ತಂದೆಯಿಂದ, ಅವರು ಅವರ ತಾತನಿಂದ ವರದಿ. ಅವರು ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು:
"ಮಕ್ಕಳಿಗೆ ಏಳು ವರ್ಷ ಪ್ರಾಯವಾದಾಗ ನಮಾಝ್ ನಿರ್ವಹಿಸಲು ಆದೇಶಿಸಿರಿ, ಹತ್ತು ವರ್ಷ
ಪ್ರಾಯವಾದಾಗ ಅದಕ್ಕಾಗಿ ಹೊಡೆಯಿರಿ ಮತ್ತು ಮಲಗುವ ಸ್ಥಳದಲ್ಲಿ ಅವರನ್ನು ಬೇರ್ಪಡಿಸಿರಿ."
[حسن] [رواه أبو داود]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ವಿವರಿಸುವುದೇನೆಂದರೆ, ಮಕ್ಕಳಿಗೆ—ಅವರು ಗಂಡಾದರೂ ಹೆಣ್ಣಾದರೂ—ಏಳು ವರ್ಷವಾದರೆ ನಮಾಝ್ ಮಾಡಲು ಆದೇಶಿಸುವುದು ಮತ್ತು ನಮಾಝ್ ಸಂಸ್ಥಾಪನೆಗೆ ಅಗತ್ಯವಾದ ವಿಷಯಗಳನ್ನು ಕಲಿಸಿಕೊಡುವುದು ತಂದೆಯ ಕಡ್ಡಾಯ ಕರ್ತವ್ಯವಾಗಿದೆ. ಹತ್ತು ವರ್ಷವಾದರೆ ಆದೇಶವನ್ನು ತೀವ್ರಗೊಳಿಸಬೇಕು ಮತ್ತು ನಮಾಝ್ ಮಾಡಲು ನಿರ್ಲಕ್ಷ್ಯ ತೋರಿದರೆ ಹೊಡೆಯಬೇಕು ಹಾಗೂ ಅವರನ್ನು ಬೇರೆ ಬೇರೆಯಾಗಿ ಮಲಗಿಸಬೇಕು.

http://sunnah.global/hadeeth/kn/show/5272